74 (186) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಇಲಾಖೆಯು ಹಿಂಬಾಕಿ ಹುದ್ದೆಗಳ ಭರ್ತಿ ವಿಷಯದಲ್ಲಿ ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿದೆಯೇ ;

ಆ) ಹಾಗಿದ್ದಲ್ಲಿ, ಇಲಾಖೆ ನೀಡಿದ ಸೂಚನೆಗಳನ್ನು ಉಳಿದ ಇಲಾಖೆಗಳಲ್ಲದೆ ಸ್ವಾಯತ್ತ ಸಂಸ್ಥೆಗಳು ಕಟ್ಟುನಿಟ್ಟಾಗಿ ಪಾಲಿಸಿವೆಯೇ ; (ಇಲಾಖಾವಾರು ಮಾಹಿತಿ ನೀಡುವುದು) ಪಾಲಿಸದಿದ್ದಲ್ಲಿ ಕೈಗೊಂಡ ಕ್ರಮವೇನು ;

ಇ) ಸಮಾಜ ಕಲ್ಯಾಣ ಇಲಾಖೆಯ ಸಲಹೆ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸದಂತಹ ಇಲಾಖೆ ಮತ್ತು ಸಂಸ್ಥೆಗಳಿಗೆ ನೀಡುವ ಅನುದಾನವನ್ನು ಕಡಿಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) ಹೌದು. ಪಾಲನೆ ಮಾಡುವುದರಿಂದ ಹುದ್ದೆಗಳ ಪ್ರಕಟಣೆ ಆಗಿದೆ ಮತ್ತು ನೇಮಕಾತಿ ಆದೇಶಗಳು ಹೊರಡಿಸಲ್ಪಡುತ್ತಿವೆ.

ಇ) ಸಮಾಜ ಕಲ್ಯಾಣ ಇಲಾಖೆಯ ಸೂಚನೆಗಳನ್ನು ಪಾಲಿಸದಂತಹ ಇಲಾಖೆ/ಸಂಸ್ಥೆಗಳಿಗೆ ಅನುದಾನ ಕಡಿತಗೊಳಿಸಲು ನಿಯಮಗಳಲ್ಲಿ ಅವಕಾಶ ವಿರುವುದಿಲ್ಲ.

75 (187) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು ;

ಆ) ಸದರಿ ಮೊರಾರ್ಜಿ ದೇಸಾಯಿ ಶಾಲೆಗಳು ಯಾವ ಯಾವ ಇಲಾಖೆಗಳ ನಿಯಂತ್ರಣದಲ್ಲಿವೆ ;

ಇ) ಮೊರಾರ್ಜಿ ದೇಸಾಯಿ ಶಾಲೆಗಳಲ್ಲಿ ಮಂಜೂರಾದ ಶಿಕ್ಷಕರುಗಳ ಸಂಖ್ಯೆ ಎಷ್ಟು ;

ಈ) ಬಹಳಷ್ಟು ಶಿಕ್ಷಕರುಗಳ ಹುದ್ದೆಗಳು ಖಾಲಿ ಇದ್ದು, ತಾತ್ಕಾಲಿಕವಾಗಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳನ್ನು ಖಾಯಂ ಮಾಡಲು ಸರ್ಕಾರ ಮುಂದಾಗುವುದೇ;

ಉ) ನವೋದಯ ಶಾಲೆಗಳ ಮಾದರಿಯಲ್ಲಿ ರಾಜ್ಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ನಡೆಸದೇ ಇರುವ ಕಾರಣವೇನು ;

ಊ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

ಋ) ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಓದುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ;

ಎ) ಹಾಗಿದ್ದಲ್ಲಿ, ಕೇಂದ್ರ ಸರ್ಕಾರದ ನವೋದಯ ಶಾಲೆಗಳ ಮಾದರಿಯಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೂ ಎಲ್ಲಾ ರೀತಿಯ ಸೌಲಭ್ಯಗಳನ್ನು ನೀಡಲಾಗುವುದೇ ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು):

ಅ) ರಾಜ್ಯದಲ್ಲಿ ಒಟ್ಟು 266 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿವೆ

ಆ) ಈ ವಸತಿ ಶಾಲೆಗಳು ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ ಅಲ್ಪಸಂಖ್ಯಾತರ ಇಲಾಖೆ ಮತ್ತು ಶಿಕ್ಷಣ ಇಲಾಖೆಯ ನಿಯಂತ್ರಣದಲ್ಲಿರುತ್ತವೆ.

ಇ) ಮೇಲ್ಕಂಡ 266 ವಸತಿ ಶಾಲೆಗಳಿಗೆ 266 ಪ್ರಾಂಶುಪಾಲರ ಮತ್ತು 2466 ಶಿಕ್ಷಕರುಗಳ ಹುದ್ದೆಗಳು ಮಂಜೂರಾಗಿವೆ.

ಈ) ಆಗಿಂದಾಗ್ಗೆ ಖಾಲಿಯಾಗುವ ಶಿಕ್ಷಕರ ಹುದ್ದೆಗಳನ್ನು ಆಯಾ ಜಿಲ್ಲಾ ಪಂಚಾಯತ್‌ಗಳು ಭರ್ತಿ ಮಾಡಿಕೊಳ್ಳುತ್ತಿವೆ. ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ವಿಚಾರ ಪ್ರಚಲಿತ ಕಾನೂನು/ನಿಯಮಗಳ ಹಿನ್ನೆಲೆಯಲ್ಲಿ ಪರಿಶೀಲನೆಯಲ್ಲಿದೆ.

ಉ) ಕೇಂದ್ರೀಯ ನವೋದಯ ವಸತಿ ಶಾಲೆಗಳನ್ನು ಕೇಂದ್ರೀಯ ನವೋದಯ ವಿದ್ಯಾಲಯ ಸಮಿತಿಯ ಮೂಲಕ ಹಾಗೂ ಜಿಲ್ಲಾ ಮಟ್ಟದಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಿರ್ವಹಿಸಲಾಗುತ್ತಿದೆ. ಪ್ರತಿ ಜಿಲ್ಲೆಗೆ ಒಂದರಂತೆ ಈ ಶಾಲೆ ಮಂಜೂರು ಮಾಡಲಾಗಿದೆ. ಈ ಶಾಲೆಗಳಲ್ಲಿ 6 ರಿಂದ 12ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಒಟ್ಟು 560 ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳಲು ಅವಕಾಶವಿರುತ್ತದೆ. ಪ್ರತಿ ವಸತಿ ಶಾಲೆಯ ವಾರ್ಷಿಕ ನಿರ್ವಹಣೆಗಾಗಿ ಅಂದಾಜು ರೂ. 1.00 ಕೋಟಿ ಒದಗಿಸಲಾಗುತ್ತಿದೆ. ಈ ವಸತಿ ಶಾಲೆಗಳಲ್ಲಿ 6 ಮತ್ತು 7ನೇ ತರಗತಿಯ ವಿದ್ಯಾರ್ಥಿಗಳಿಗೆ ರಾಜ್ಯ ಪಠ್ಯ ಕ್ರಮದಂತೆ ಬೋಧನೆ ನೀಡಿ 8 ರಿಂದ 12ನೇ ನೀಡಲಾಗುತ್ತಿದೆ. ಪ್ರತಿ ವಸತಿ ಶಾಲೆಗೆ 35 ಹುದ್ದೆಗಳನ್ನು 24 ಶಿಕ್ಷಕರು 11 ಬೋಧಕೇತರ ಸಿಬ್ಬಂದಿ ಹಾಗೂ 5 ಜನ ಹೊರ ಸಂಪನ್ಮೂಲದವರನ್ನು ನೇಮಿಸಲಾಗುತ್ತಿದೆ. ರಾಜ್ಯ ಸರ್ಕಾರದ ವಿವಿಧ ವರ್ಗದವರಿಗಾಗಿ ನಡೆಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಿರ್ವಹಿಸಲಾಗುತ್ತಿದೆ. ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ 6 ರಿಂದ 10ನೇ ತರಗತಿಯವರಗೆ ರಾಜ್ಯ ಪಠ್ಯ ಕ್ರಮದಂತೆ ವಿದ್ಯಾಭ್ಯಾಸ ನೀಡಲಾಗುತ್ತಿದೆ. ಒಟ್ಟು 250 ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳಲು ಅವಕಾಶವಿರುತ್ತದೆ. ಪ್ರತಿ ವಸತಿ ಶಾಲೆಯ ವಾರ್ಷಿಕ ನಿರ್ವಹಣೆಗಾಗಿ ಅಂದಾಜು ರೂ. 35.00 ಲಕ್ಷದಿಂದ ರೂ. 4.00 ಲಕ್ಷಗಳನ್ನು

ಒದಗಿಸಲಾಗುತ್ತಿದೆ. ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಒಟ್ಟು 25 ಸಿಬ್ಬಂದಿ ವರ್ಗದವರು 11 ಬೋಧಕ ಸಿಬ್ಬಂದಿ 14 ಬೋಧಕೇತರ ಸಿಬ್ಬಂದಿ ಕೆಲಸ ನಿರ್ವಹಿಸುತ್ತಿದ್ದಾರೆ.

ಹೀಗೆ ಈ ಎರಡೂ ಬೇರೆ ಬೇರೆ ರೀತಿಯ ಯೋಜನೆಗಳಾಗಿವೆ.

ಊ) ಪ್ರಶ್ನೆ (ಉ)ಗೆ ನೀಡಿದ ಉತ್ತರದ ಹಿನ್ನೆಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಋ) ಒದಗಿಸಲಾಗುತ್ತಿದೆ.

ಎ) ಹಣದ ಲಭ್ಯತೆ ಆಧರಿಸಿ ಸಾಧ್ಯವಾದಷ್ಟು ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆ.

76 (188) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಯ ಸಂಬಂಧದ ಸಂಪುಟದ ಉಪಸಮಿತಿ ನಿಯಮಾನುಸಾರ ಕನಿಷ್ಠ ಎಷ್ಟು ದಿನಗಳಿಗೊಮ್ಮೆ ಸಭೆ ಸೇರಿ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಯ ಪ್ರಗತಿ ಪರಿಶೀಲನೆ ನಡೆಸಬಹುದಾಗಿದೆ.

ಆ) ಸಮಿತಿಯು ಸೆಪ್ಟೆಂಬರ್‌ನಿಂದ ಡಿಸೆಂಬರ್ 2006 ತಿಂಗಳುಗಳಲ್ಲಿ ಎಷ್ಟು ಸಭೆಗಳನ್ನು ನಡೆಸಿದೆ;

ಇ) ಈ ಸಭೆಗಳಲ್ಲಿ ಎಷ್ಟು ಇಲಾಖೆಗಳ ಬ್ಯಾಕ್‌ಲಾಗ್ ಹುದೆಗಳ ಭರ್ತಿಯ ಪ್ರಗತಿಯ ಬಗ್ಗೆ ಪರಿಶೀಲನೆ ನಡೆಸಲಾಗಿದೆ ;

ಈ) ಕಾಲ ಕಾಲಕ್ಕೆ ಸಭೆಗಳು ನಡೆಯದಿರುವುದು ನಿಜವಲ್ಲವೇ ;

ಉ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಅಥವಾ ತೆಗೆದುಕೊಳ್ಳುವ ಕ್ರಮವೇನು ?

ಶ್ರೀ ಬಾಲಚಂದ್ರ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು):

ಅ) ಬ್ಯಾಕ್‌ಲಾಗ್ ಹುದ್ದೆಗಳ ಬಗೆಗಿನ ಸಚಿವ ಸಂಪುಟ ಉಪಸಮಿತಿಯ ನಿರ್ದಿಷ್ಟ ಅವಧಿಯಲ್ಲಿ ಗರಿಷ್ಟ ಅಥವಾ ಕನಿಷ್ಟ ಎಷ್ಟು ದಿನಗಳಿಗೊಮ್ಮೆ ಸಭೆ ಸೇರಬೇಕೆಂಬ ನಿಯಮ ಇರುವುದಿಲ್ಲ. ಅಗತ್ಯತೆಗನುಗುಣವಾಗಿ ಸಭೆ ಸೇರುವುದು.

ಆ) ಸಮಿತಿಯು ಸೆಪ್ಟೆಂಬರ್ 06 ರಿಂದ ಡಿಸೆಂಬರ್ 2006ರವರೆಗೆ ಒಂದು ಬಾರಿ ಸಭೆ ಸೇರಿದೆ.

ಇ) ಈ ಸಭೆಯಲ್ಲಿ ಬ್ಯಾಕ್‌ಲಾಗ್ ಹುದ್ದೆಗಳ ಪ್ರಕ್ರಿಯೆಯನ್ನು ಪೂರ್ಣಗೊಳಿಸದೇ ಇರುವ ಎಲ್ಲಾ ಇಲಾಖೆಗಳ ಪ್ರಗತಿ ಬಗ್ಗೆ ಪರಿಶೀಲನೆ ನಡೆಸಲಾಗಿದೆ.

ಈ) ಇಲ್ಲ

ಉ) ಉದ್ಭವಿಸುವುದಿಲ್ಲ.